# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 565 |
| ಸದಸ್ಯರ ಹೆಸರು | : | ಶ್ರೀ ಶರಣಗೌಡ ಬಯ್ಯಾಪುರ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾಗಿದ ದಿನಾಂಕ | : | 11.03.2025 |
| ಉತ್ತರಿಸುವ ಸಚಿವರು | : | ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಚೂರು ಜಿಲ್ಲೆಯ ಲಿಂಗಸಗೂರು ತಾಲ್ಲೂಕಿನ ಮುದಗಲ್ ಪಟ್ಟಣಕ್ಕೆ 24X7 ಕುಡಿಯುವ ನೀರನ್ನು ಒದಗಿಸುವ ಕಾಮಗಾರಿ ಯಾವಾಗ ಪ್ರಾರಂಭವಾಯಿತು; ಸದರಿ ಕಾಮಗಾರಿಯು ಪ್ರಸ್ತುತ ಯಾವ ಹಂತದಲ್ಲಿದೆ; | ಕೆ.ಯು.ಐ.ಡಿ.ಎಫ್.ಸಿ ವತಿಯಿಂದ ಅನುಷ್ಠಾನಗೊಳಿಸುತ್ತಿರುವ 9 ಪಟ್ಟಣಗಳ ಯೋಜನೆಯಡಿಯಲ್ಲಿ ಮುದಗಲ್ ಪಟ್ಟಣಕ್ಕೆ ಕುಡಿಯುವ ನೀರು ಸರಬರಾಜು ಉನ್ನತೀಕರಣ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗಿದ್ದು, ಇದು 24x7 ಕುಡಿಯುವ ನೀರಿನ ಯೋಜನೆಯಾಗಿರುವುದಿಲ್ಲ.<br><br>ಮುದಗಲ್ ಪಟ್ಟಣದ ಕುಡಿಯುವ ನೀರು ಸರಬರಾಜು ಕಾಮಗಾರಿಯನ್ನು ದಿನಾಂಕ:07-03-2018 ರಂದು ಪ್ರಾರಂಭಿಸಲಾಗಿತ್ತು. ಸದರಿ ಕಾಮಗಾರಿಯನ್ನು ಕರಾರಿನಂತೆ ದಿನಾಂಕ:06-09-2019ಕ್ಕೆ ಪೂರ್ಣಗೊಳಿಸಬೇಕಾಗಿತ್ತು.<br><br>ದಿನಾಂಕ:31.08.2022 ರ ತನಕ ಗುತ್ತಿಗೆ ಅವಧಿ ವಿಸ್ತರಣೆ ಮಾಡಿದರೂ ಸಹ ಗುತ್ತಿಗೆದಾರರು ಕಾಮಗಾರಿಯನ್ನು ಪೂರ್ಣಗೊಳಿಸಲು ವಿಫಲವಾದ ಕಾರಣ ದಿನಾಂಕ:10.07.2023 ರಂದು ಗುತ್ತಿಗೆ ಕರಾರನ್ನು ರದ್ದು ಪಡಿಸಿದ ಕಾರಣ ಕಾಮಗಾರಿಯು ಸ್ಥಗಿತಗೊಂಡಿರುತ್ತದೆ ಹಾಗೂ ಯಥಾಸ್ಥಿತಿಯಲ್ಲಿ ಮುದಗಲ್ ಪುರಸಭೆಗೆ ಹಸ್ತಾಂತರಿಸಲಾಗಿರುತ್ತದೆ.<br><br>ಗುತ್ತಿಗೆ ರದ್ದುಪಡಿಸುವ ವೇಳೆಗೆ ಸದರಿ ಕಾಮಗಾರಿಗೆ ರೂ.6.62 ಕೋಟಿ ವೆಚ್ಚ ಮಾಡಲಾಗಿದ್ದು ಶೇ.27% ರಷ್ಟು ಭೌತಿಕ ಪ್ರಗತಿಯಾಗಿರುತ್ತದೆ. |
| ಆ) | ಈ ಕಾಮಗಾರಿಯು ಸ್ಥಗಿತಗೊಂಡಿದ್ದಲ್ಲಿ ಇದಕ್ಕೆ ಕಾರಣವೇನು; | ಕೋವಿಡ್ ಸಮಯದಲ್ಲಿ ಕುಂಠಿತವಾದ ಕಾಮಗಾರಿಯು ಗುತ್ತಿಗೆದಾರರ ವಿಳಂಭದೋರಣೆಯಿಂದ ಪ್ರಗತಿಯಾಗದ ಕಾರಣ ನಿಯಮಾವಳಿಯಂತೆ ಗುತ್ತಿಗೆ ಕರಾರನ್ನು ದಿನಾಂಕ:10.07.2023 ರಂದು ರದ್ದುಪಡಿಸಿದ ಕಾರಣ ಕಾಮಗಾರಿ ಸ್ಥಗಿತಗೊಂಡಿರುತ್ತದೆ.<br><br>ಮುಂದುವರೆದು, ಕೆ.ಯು.ಐ.ಡಿ.ಎಫ್.ಸಿ ವತಿಯಿಂದ ಅನುಷ್ಠಾನಗೊಳಿಸುತ್ತಿರುವ 9 ಪಟ್ಟಣಗಳ ಕುಡಿಯುವ ನೀರಿನ ಉನ್ನತೀಕರಣ ಯೋಜನೆಯ ಮಂಜೂರಾತಿ ಆದೇಶದಂತೆ ಶೇ.50 ರಷ್ಟು ಸರ್ಕಾರದ ಅನುದಾನ ಹಾಗೂ ಶೇ.50 ರಷ್ಟು ಸ್ಥಳೀಯ ಸಂಸ್ಥೆಗಳ ಪರವಾಗಿ ಮಾರುಕಟ್ಟೆ ಸಾಲ ಪಡೆದು ಯೋಜನೆಯನ್ನು ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿತ್ತು.<br><br>ಆದರೆ ಭಾರತೀಯ ರಿಸರ್ವ್ ಬ್ಯಾಂಕ್ ನ ಬದಲಾದ ಮಾರ್ಗ ಸೂಚಿಯಂತೆ ಸ್ಥಳೀಯ ಸಂಸ್ಥೆಗಳ ಪರವಾಗಿ ಮಾರುಕಟ್ಟೆ ಸಾಲ ಲಭ್ಯವಾಗದ ಕಾರಣ ಯೋಜನೆಯನ್ನು ಅನುಷ್ಠಾನಗೊಳಿಸಲು ಸಾಧ್ಯವಾಗಿರುವುದಿಲ್ಲ. |

| | | |
|---|---|---|
| ಇ) | ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು; (ಸಂಪೂರ್ಣ ಮಾಹಿತಿ ಒದಗಿಸುವುದು) | ಸದರಿ ಕಾಮಗಾರಿಯನ್ನು 2014-15ನೇ ಸಾಲಿನ ದರಪಟ್ಟಿಯನುಸಾರ ತಯಾರಿಸಲಾಗಿದ್ದ ಯೋಜನಾ ವರದಿ ಅನುಸಾರ ರೂ.31.29 ಕೋಟಿಗಳಿಗೆ ಕಾಮಗಾರಿಯನ್ನು ಗುತ್ತಿಗೆದಾರರಿಗೆ ವಹಿಸಿಕೊಡಲಾಗಿತ್ತು.<br><br>2023-24 ನೇ ಸಾಲಿನ ದರಪಟ್ಟಿಯನ್ವಯ ಕಾಮಗಾರಿಯ ಅಂದಾಜು ವೆಚ್ಚ ರೂ.44.79 ಕೋಟಿಗಳಾಗಿರುತ್ತದೆ.<br><br>2023-24 ನೇ ಸಾಲಿನ ದರಪಟ್ಟಿಯನ್ವಯ ಕಾಮಗಾರಿಯ ಅಂದಾಜು ವೆಚ್ಚ ಹೆಚ್ಚಳವಾಗಿರುವುದರಿಂದ ಮಾರುಕಟ್ಟೆ ಸಾಲ ಲಭ್ಯವಾಗದ ಕಾರಣ ಯೋಜನೆಯ ಬಾಕಿ ಕಾಮಗಾರಿಗಳನ್ನು ಪೂರ್ಣಗೊಳಿಸಲು ಅವಶ್ಯಕವಿರುವ ಮೊತ್ತ ರೂ.44.79 ಕೋಟಿ ಅನುದಾನವನ್ನು ಒದಗಿಸುವ ಪ್ರಸ್ತಾವನೆಯು ಸರ್ಕಾರದಲ್ಲಿ ಪರಿಶೀಲನೆಯಲ್ಲಿರುತ್ತದೆ. |
| ಈ) | ಈ ಕಾಮಗಾರಿಯ ಅಂದಾಜು ಮೊತ್ತವೆಷ್ಟು;<br>ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳಾವು ಹಾಗೂ ಈ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು? (ಸಂಪೂರ್ಣ ಮಾಹಿತಿ ಒದಗಿಸುವುದು) | ಸದರಿ ಕಾಮಗಾರಿಯನ್ನು 2014-15ನೇ ಸಾಲಿನ ದರಪಟ್ಟಿಯನುಸಾರ ತಯಾರಿಸಲಾಗಿದ್ದ ವಿಸ್ತೃತ ಯೋಜನಾ ವರದಿ ಅನುಸಾರ ಅಂದಾಜು ವೆಚ್ಚ ರೂ.31.29 ಕೋಟಿಗಳಾಗಿರುತ್ತದೆ. 2023-24ನೇ ಸಾಲಿನ ದರಪಟ್ಟಿಯನ್ವಯ ರೂ.44.79 ಕೋಟಿಗಳು ಅವಶ್ಯಕವಿರುತ್ತದೆ.<br><br>ಸದರಿ ಕಾಮಗಾರಿಯಲ್ಲಿ ಬಾಕಿ ಉಳಿದಿರುವ ಕಾಮಗಾರಿಗಳನ್ನು ಪೂರ್ಣಗೊಳಿಸಲು ಅಂದಾಜು ಪಟ್ಟಿ ತಯಾರಿಸಲಾಗಿದ್ದು, 9 ಪಟ್ಟಣಗಳ ಪೈಕಿ 6 ಪಟ್ಟಣಗಳಿಗೆ ಅವಶ್ಯಕವಿರುವ ಅನುದಾನವನ್ನು ಲಭ್ಯತೆಗೆ ಅನುಗುಣವಾಗಿ ನಿಯಮಾನುಸಾರ ಕಾಮಗಾರಿಯನ್ನು ಪೂರ್ಣಗೊಳಿಸಲು ಅಗತ್ಯ ಕ್ರಮಕೈಗೊಳ್ಳಲಾಗುವುದು. |

ಕಡತ ಸಂಖ್ಯೆ:ನಅಇ 43 ಪಿಆರ್‌ಜೆ 2025

**(ಬಿ. ಎಸ್. ಸುರೇಶ)**

ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು